ಊ) ಈ ವಿಭಾಗದ ವ್ಯಾಪ್ತಿಯಲ್ಲಿ ಬರುವ ರಾಜ್ಯ ಹೆದ್ದಾರಿಗಳ ದುರಸ್ತಿ ಕಾಮಗಾರಿಗಳು ಪ್ರಗತಿಯಲ್ಲಿದ್ದು ಫೆಬ್ರವರಿ 05ರಲ್ಲಿ ಪೂರ್ಣಗೊಳಿಸಲಾಗುವುದು.

41(257) ಶ್ರೀ ಚಿಕ್ಕನಗೌಡರ ಸಿದ್ದನಗೌಡ ಈಶ್ವರಗೌಡ (ಕಲಘಟಗಿ) : ಮಾನ್ಯ ಯುವಜನ ಸೇವಾ ಹಾಗೂ ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಧಾರವಾಡ ಜಿಲ್ಲೆಯಲ್ಲಿರುವ ತಾಲ್ಲೂಕುವಾರು ಕ್ರೀಡಾಂಗಣಗಳ ಸಂಖ್ಯೆ ಎಷ್ಟು;

ಆ) ಸದರಿ ಕ್ರೀಡಾಂಗಣಗಳು ವ್ಯವಸ್ಥಿತವಾಗಿ, ಸುಸಜ್ಜಿತವಾಗಿ, ಕ್ರೀಡಾಪಟುಗಳ ಬಳಕೆಗೆ ಸಿಗುತ್ತಿವೆಯೇ;

ಇ) ಕಲಘಟಗಿ ಗ್ರಾಮ 20,000 ಜನಸಂಖ್ಯೆ ಹೊಂದಿದ್ದು, ಕ್ರೀಡಾಂಗಣವನ್ನು ಮಂಜೂರು ಮಾಡುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ;

ಈ) ಹಾಗಿದ್ದಲ್ಲಿ, ಯಾವಾಗ ಮಂಜೂರು ಮಾಡಿ ಕ್ರೀಡಾಂಗಣ ನಿರ್ಮಿಸಲಾಗುತ್ತದೆ;

ಉ) ಇದಕ್ಕೆ ಬೇಕಾಗುವ ಅನುದಾನವೆಷ್ಟು;

ಊ) ಇದಕ್ಕೆ ಅಗತ್ಯವಿರುವ ಜಾಗವನ್ನು ಒದಗಿಸಲಾಗಿದೆಯೇ;

ಋ) ಯಾವಾಗ ಕಾರ್ಯಾರಂಭ ಗೊಳಿಸಲಾಗುವುದು?

ಶ್ರೀ ಜಬ್ಬಾರ್ ಖಾನ್ ಹೊನ್ನಾಳಿ (ಯುವಜನ ಸೇವಾ ಹಾಗೂ ಕ್ರೀಡಾ ರಾಜ್ಯ ಸಚಿವರು):

ಅ) ಎರಡು

ಆ) ಹೌದು

ಇ) ಇದೆ

ಈ) ಅಗತ್ಯವಿರುವ ನಿವೇಶನ ಪಡೆಯಲು ಕ್ರಮ ಕೈಗೊಳ್ಳಲಾಗುತ್ತಿದೆ. ನಿವೇಶನ ಇಲಾಖೆಗೆ ಲಭ್ಯವಾದ ಕೂಡಲೇ ಕ್ರೀಡಾಂಗಣ ನಿರ್ಮಿಸಲು ಕ್ರಮ ಜರುಗಿಸಲಾಗುವುದು.

ಉ) ಅಂದಾಜು ಪಟ್ಟಿ ಸಿದ್ದಪಡಿಸಿದ ನಂತರವೇ ಖಚಿತವಾದ ಅನುದಾನದ ಮೊತ್ತ ತಿಳಿಯಲ್ಪಡುವುದು.

ಊ) ಇನ್ನೂ ಇಲ್ಲ.

ಋ) ಸೂಕ್ತ ನಿವೇಶನ ದೊರೆತ ನಂತರ ಅಗತ್ಯ ಕ್ರಮ ಕೈಗೊಳ್ಳಲಾಗುವುದು.

42(870) ಶ್ರೀ ಧ್ರುವನಾರಾಯಣ ಆರ್ (ಸಂತೇಮರಳ್ಳಿ) : ಮಾನ್ಯ ಪ್ರವಾಸೋದ್ಯಮ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ ?

ಅ) ಚಾಮರಾಜನಗರ ಜಿಲ್ಲೆಯ ಪ್ರವಾಸಿ ತಾಣಗಳಾದ ಬಿಳಿಗಿರಿರಂಗನ ಬೆಟ್ಟದಲ್ಲಿ ಮೂಲ ಸೌಕರ್ಯಗಳಾದ ರಸ್ತೆ, ವಸತಿ, ಶೌಚಾಲಯ ಇತ್ಯಾದಿ ಸೌಲಭ್ಯಗಳು ಇಲ್ಲದೆ ಪ್ರವಾಸಿಗರಿಗೆ ಮತ್ತು ಸಾರ್ವಜನಿಕರಿಗೆ ಅನಾನುಕೂಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದರೆ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು;

ಶ್ರೀ ಡಿ.ಟಿ. ಜಯಕುಮಾರ್ (ಪ್ರವಾಸೋದ್ಯಮ ಸಚಿವರು) :

ಅ) ಹೌದು

ಆ) ಕೆ. ಗುಡಿಯಲ್ಲಿ ಅರಣ್ಯ, ವಸತಿ ಮತ್ತು ವಿಹಾರಧಾಮ ಸಂಸ್ಥೆಯು ವಸತಿ ಸೌಲಭ್ಯವನ್ನು ಒದಗಿಸಿದೆ, ಬಿಳಿಗಿರಿರಂಗನ ಬೆಟ್ಟದಲ್ಲಿ ಉಪಾಹಾರ ಗೃಹವನ್ನು ನಿರ್ಮಿಸಿದ್ದು ಇದನ್ನು ಖಾಸಗೀಕರಣ ಗೊಳಿಸಲು ಕ್ರಮ ಕೈಗೊಳ್ಳಲಾಗಿದೆ.